# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 177(1286+1083)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಶ್ರೀ ಎಸ್. ಎಲ್ . ಭೋಜೇಗೌಡ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಅರಣ್ಯ ಇಲಾಖೆಯ ಸಂಯೋಜಿತ ಜೇಷ್ಠತಾ ಪಟ್ಟಿ ಬಗ್ಗೆ

(ಅ) ಉಪವಲಯ ಅರಣ್ಯಾಧಿಕಾರಿಗಳ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಪಡೆದಿರುವ ಅಭಿಪ್ರಾಯದಂತೆ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಅಂತಿಮಗೊಳಿಸಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಪರಿಷ್ಕೃತ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗುವುದು; (ಮಾಹಿತಿ ನೀಡುವುದು)

(ಆ) 1996ನೇ ಸಾಲಿನಿಂದ 2019ರವರೆಗೆ ಯಾವ ಯಾವ ಅವಧಿಗೆ ಸಂಬಂಧಿಸಿದಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ತೀರ್ಪನ್ನು ಪಾಲಿಸಿ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು; (ಪ್ರಕಟಿಸಿರುವ ಅಧಿಕೃತ ಜ್ಞಾಪನಾ ಪತ್ರಗಳನ್ನು ಒದಗಿಸುವುದು)

(ಇ) 2018ರವರೆಗೆ ರಾಜ್ಯಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಆಧರಿಸಿ, ವಲಯ ಅರಣ್ಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡುತ್ತಿದ್ದ ಕ್ರಮವನ್ನು ಏಕಾಏಕೀ ಬದಲಿಸಲು ಇಲಾಖಾ ಮುಖ್ಯಸ್ಥರಿಗೆ ಸರ್ಕಾರ ನಿರ್ದೇಶನ ನೀಡಿದೆಯೇ; ಹೌದಾದಲ್ಲಿ, ಅದರ ಪ್ರತಿಯನ್ನು ಒದಗಿಸುವುದು;

(ಈ) ದಿನಾಂಕ 22-02-2021ರಂದು ಉಪ ವಲಯ ಅರಣ್ಯಾಧಿಕಾರಿಗಳ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿ ಪ್ರಕಟಿಸದೆ, ವಲಯ ಅರಣ್ಯಾಧಿಕಾರಿ ಹುದ್ದೆಗೆ ಮುಂಬಡ್ತಿ ಪ್ರಕ್ರಿಯೆ ಜರುಗಿಸಿರುವುದು ನಿಯಮಬಾಹಿರ ಕ್ರಮವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ಜರುಗಿಸಿದ ಕ್ರಮಗಳೇನು? (ಒಂದು ವೇಳೆ ಈ ರೀತಿ ಮುಂಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶವಿದ್ದಲ್ಲಿ ಅದಕ್ಕೆ ಸಂಬಂಧಿಸಿದ ಸುತ್ತೋಲೆ/ಮಾರ್ಗಸೂಚಿಯ ಪ್ರತಿಗಳನ್ನು ಒದಗಿಸುವುದು)